| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 646 |
| ಸದಸ್ಯರ ಹೆಸರು | ಶ್ರೀ ಸಲೀಂ ಅಹ್ಮದ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 23.12.2022 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ತಡೆಯಿಲ್ಲದೆ ನಡೆಯುತ್ತಿರುವ ನಕಲಿ ರಸಗೊಬ್ಬರದ ದಂಧೆಯಿಂದ ರೈತಾಪಿ ವರ್ಗದವರು ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ನಕಲಿ ರಸಗೊಬ್ಬರದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ರಾಜ್ಯದಲ್ಲಿ ನಿರಂತರವಾಗಿ ಕಳಪೆ ಹಾಗೂ ಕಲಬೆರಕೆ ರಸಗೊಬ್ಬರ ಪೂರೈಕೆ ಮಾಡುತ್ತಿರುವವರ ವಿರುದ್ಧ ಕಳೆದ 5 ವರ್ಷದಿಂದ ಎಷ್ಟು ಮೊಕದ್ದಮೆಗಳನ್ನು ದಾಖಲಿಸಲಾಗಿದೆ; ಎಷ್ಟು ಜನರನ್ನು ಬಂಧಿಸಲಾಗಿದೆ; ಈ ನಕಲಿ ರಸಗೊಬ್ಬರ ತಯಾರಿಕಾ ಘಟಕಗಳು ಯಾವ ಯಾವ ಸ್ಥಳಗಳಲ್ಲಿ ಇದೆ ಎನ್ನುವುದನ್ನು ಕೃಷಿ ಇಲಾಖೆಯ ಜಾಗೃತ ಕೋಶದ ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆಯೇ; | ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಕಳಪೆ ಹಾಗೂ ಕಲಬೆರಕೆ ರಸಗೊಬ್ಬರ ಪೂರೈಕೆ ಮಾಡುತ್ತಿರುವವರ ವಿರುದ್ಧ ಒಟ್ಟು 277 ಮೊಕದ್ದಮೆಗಳನ್ನು ದಾಖಲಿಸಲಾಗಿದ್ದು 04 ಜನರನ್ನು ಬಂಧಿಸಲಾಗಿದೆ (ಮಂಡ್ಯ ಜಿಲ್ಲೆ-01 ಹಾಗೂ ಕೊಪ್ಪಳ ಜಿಲ್ಲೆ-03).<br>ಮುಂದುವರೆದು ನಕಲಿ ರಸಗೊಬ್ಬರ ತಯಾರಿಕಾ ಘಟಕಗಳ ವಿವರ ಈ ಕೆಳಕಂಡಂತಿವೆ.<br>1. ಪ್ರೀತಮ್ ಇಂಡಸ್ಟ್ರೀಸ್ ನವನಗರ, ಬಾಗಲಕೋಟೆ ಜಿಲ್ಲೆ.<br>2. ರಿ.ಸಂ.250/3 ಇಂಡಿ ತಾಲ್ಲೂಕಿನ ವಿಜಯಪುರ ಜಿಲ್ಲೆ ಇಂಗಳಗಿ ಗ್ರಾಮದ ಜಮೀನಿನಲ್ಲಿರುವ ಶೆಡ್ ಸ್ಥಳಗಳಲ್ಲಿ ಇದೆ ಯೆಂದು ಕೃಷಿ ಇಲಾಖೆಯ ಜಾಗೃತ ಕೋಶದ ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆ. |
| ಇ) | ರೈತರಿಗೆ ಕಡಿಮೆ ಬೆಲೆಯ ಆಮಿಷವನ್ನು ಒಡ್ಡಿ ಕಳಪೆ ಗೊಬ್ಬರವನ್ನು ನೀಡಿ ವಂಚಿಸುತ್ತಿರುವ ಈ ದಂಧೆಕೋರರನ್ನು ಮಟ್ಟಹಾಕಿ , ರೈತಾಪಿ ಜನರನ್ನು ರಕ್ಷಿಸುವ ಸಲುವಾಗಿ ಸರ್ಕಾರವು ಯಾವ ಕ್ರಮವನ್ನು ವಹಿಸಿದೆ? | ಸರ್ಕಾರವು ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955 ರಡಿ ವಿವಿಧ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ರಾಜ್ಯದಲ್ಲಿ ಅಪರ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಜಾಗೃತಕೋಶ ರಚಿಸಲಾಗಿರುತ್ತದೆ ಮತ್ತು ಇವರ ಅಧೀನದಲ್ಲಿ ರಾಜ್ಯದ 4 ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರ್ಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತಕೋಶ) ಕಾರ್ಯ ನಿರ್ವಹಿಸುತ್ತಿದ್ದಾರೆ. ಜಾಗೃತಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಮತ್ತು ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ದೂರುಗಳನ್ನು ಆಧರಿಸಿ ಮತ್ತು ಅವರ ವ್ಯಾಪ್ತಿಯಲ್ಲಿನ ರಸಗೊಬ್ಬರ ಮಾರಾಟ ಮಳಿಗೆ/ಉತ್ಪಾದನಾ ಘಟಕಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ರಸಗೊಬ್ಬರ (ನಿಯಂತ್ರಣ) ಆದೇಶ, 1985 ರ ಉಲ್ಲಂಘನೆ ಕಂಡು ಬಂದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುತ್ತಿದ್ದಾರೆ. |

ಸಂಖ್ಯೆ: AGRI-ACT/280/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು